Mail sent to all HOO's on 14/10/25 @ 4:15pm

**ಕರ್ನಾಟಕ ಸರ್ಕಾರ**

ಸಂಖ್ಯೆ: MWD 769 MDS 2025

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಡಾ||ಬಿ.ಆರ್ ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:14.10.2025.

**ಸುತ್ತೋಲೆ**

**ವಿಷಯ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧೀನ ಕಚೇರಿಗಳು, ಜಿಲ್ಲಾ ಕಚೇರಿಗಳು, ತಾಲ್ಲೂಕು ಕಚೇರಿಗಳು ವಸತಿ ಶಾಲೆ/ ಕಾಲೇಜು ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಅನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸುವ ಬಗ್ಗೆ.

******

ಮಕ್ಕಳ ಹಕ್ಕುಗಳ ರಕ್ಷಣೆ ಇಂದಿನ ದಿನಗಳಲ್ಲಿ ತುರ್ತು ಅಗತ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಅನುಷ್ಠಾನಗೊಂಡಿರುವ **ಮಿಷನ್ ವಾತ್ಸಲ್ಯ ಯೋಜನೆಯೂ** ಮಕ್ಕಳ ಅಭಿವೃದ್ಧಿ ಹಾಗೂ ರಕ್ಷಣೆಯ ಆದ್ಯತೆಯನ್ನು ಸಾಧಿಸುವ ಒಂದು ಮಾರ್ಗವಾಗಿದ್ದು, ಸಂಕಷ್ಟದಲ್ಲಿನ ಹಾಗೂ ಸವಾಲಿನಲ್ಲಿರುವ ಮಕ್ಕಳ ಹಿತರಕ್ಷಣೆಗೆ ಹೆಚ್ಚು ಒತ್ತು ನೀಡುತ್ತಿದೆ. ಇಂತಹ ಮಕ್ಕಳ ಗುರುತಿಸುವಿಕೆ, ಸಂಕಷ್ಟ ಸ್ಥಿತಿಯಲ್ಲಿ ಮಾಹಿತಿ ಹಂಚಿಕೆ ಹಾಗೂ ಪುನರ್ವಸತಿ ಸೇವೆ ಒದಗಿಸುವಲ್ಲಿ **ಮಕ್ಕಳ ಸಹಾಯವಾಣಿ ಸಂಖ್ಯೆ: 1098** ಮಹತ್ವದ ಪಾತ್ರವಹಿಸುತ್ತದೆ. ಈ ಸಂಖ್ಯೆಯನ್ನು ವ್ಯಾಪಕವಾಗಿ ಪ್ರಚಾರಮಾಡಿದಲ್ಲಿ ಬಾಲ್ಯವಿವಾಹ, ಬಾಲ ಕಾರ್ಮಿಕತೆ, ಸಂಕಷ್ಟದಲ್ಲಿನ ಮಕ್ಕಳ ರಕ್ಷಣೆ ಸೇರಿದಂತೆ ವಿವಿಧ ರೀತಿಯ ಮಕ್ಕಳ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ಸಾಧ್ಯವಾಗಲಿದೆ.

ಈ ಹಿನ್ನೆಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧೀನ ಕಚೇರಿಗಳು, ಜಿಲ್ಲಾ ಕಚೇರಿಗಳು, ತಾಲ್ಲೂಕು ಕಚೇರಿಗಳು ವಸತಿ ಶಾಲೆ/ ಕಾಲೇಜು ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಅನ್ನು ವ್ಯಾಪಕವಾಗಿ ಪ್ರಚಾರಮಾಡಲು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ಸೂಚಿಸಲಾಗಿದೆ.

14/10/2025

(ಎಸ್.ಎಜಾಸ್ ಪಾಷ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ.

**ಇವರಿಗೆ,**

1. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವಸಂತನಗರ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ನಿ. ಕೆ.ಎಂ.ಡಿ.ಸಿ. ಭವನ, ಶೇಷಾದ್ರಿಪುರಂ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮ, ಬೆಂಗಳೂರು.

..2

Scanned with OKEN Scanner

4. ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಬೆಂಗಳೂರು.
5. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ, ಕೆ.ಎಂ.ಡಿ.ಸಿ. ಭವನ, ಶೇಷಾದ್ರಿಪುರಂ, ಬೆಂಗಳೂರು.
6. ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಹಜ್ ಸಮಿತಿ, ಹಜ್ ಭವನ, ತಿರುಮೇನಹಳ್ಳಿ, ಬೆಂಗಳೂರು
7. ನಿಬಂಧಕರು, ಕರ್ನಾಟಕ ಉರ್ದು ಅಕಾಡೆಮಿ, ಕೆ.ಎಂ.ಡಿ.ಸಿ. ಭವನ, ಬೆಂಗಳೂರು.
8. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ವಕ್ಫ್ ಪರಿಷತ್ತು ಮತ್ತು ಮಹಿಳಾ ಅಭಿವೃದ್ಧಿ ಪ್ರತಿಷ್ಠಾನ, ಹಜ್‌ಭವನ, ತಿರುಮೇನಹಳ್ಳಿ, ಬೆಂಗಳೂರು.
9. ಎಲ್ಲಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, (ನಿರ್ದೇಶಕರ ಮುಖಾಂತರ)
10. ಎಲ್ಲಾ ಜಿಲ್ಲೆಯ ಜಿಲ್ಲಾ ವಕ್ಫ್ ಅಧಿಕಾರಿಗಳು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, [ವಕ್ಫ್ ಮಂಡಳಿ ಮುಖಾಂತರ]
11. ಎಲ್ಲಾ ಜಿಲ್ಲೆಯ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ನಿ.
12. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ

ಪ್ರತಿ ಮಾಹಿತಿಗಾಗಿ,

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ.
2. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, 4ನೇ ಮಹಡಿ, ಕೃಷಿ ಭವನ, ನೃಪತುಂಗ ರಸ್ತೆ, ರಾಣಿ ಚೆನ್ನಮ್ಮ ವೃತ್ತ, ಬೆಂಗಳೂರು-01.

14/10/25

Scanned with OKEN Scanner